Durga Suladi Lyrics In Kannada

ತಾಳ – ಧ್ರುವ

ದುರ್ಗಾ ದುರ್ಗೆಯೆ ಮಹದುಷ್ಟಜನ ಸಂಹಾರೆ
ದುರ್ಗಾಂತರ್ಗತ ದುರ್ಗೆ ದುರ್ಲಭೆ ಸುಲಭೆ
ದುರ್ಗಮವಾಗಿದೆ ನಿನ್ನ ಮಹಿಮೆ ಬೊಮ್ಮ
ಭರ್ಗಾದಿಗಳಿಗೆಲ್ಲ ಗುಣಿಸಿದರೂ
ಸ್ವರ್ಗ ಭೂಮಿ ಪಾತಾಳ ವ್ಯಾಪುತ ದೇವಿ
ವರ್ಗಕ್ಕೆ ಮೀರಿದ ಬಲು ಸುಂದರೀ
ದುರ್ಗಣದವರ ಬಾಧೆ ಬಹಳವಾಗಿದೆ ತಾಯಿ
ದುರ್ಗತಿಹಾರೆ ನಾನು ಪೇಳುವುದೇನು
ದುರ್ಗಂಧವಾಗಿದೆ ಸಂಸೃತಿ ನೋಡಿದರೆ
ನಿರ್ಗಮ ನಾ ಕಾಣೆನಮ್ಮ ಮಂಗಳಾಂಗೆ
ದುರ್ಗೆ ಹೆ ದುರ್ಗೆ ಮಹಾ ದುರ್ಗೆ ಭೂದುರ್ಗೆ ವಿಷ್ಣು
ದುರ್ಗೆ ದುರ್ಜಯ ದುರ್ಧರ್ಕ್ಷೆ ಶಕ್ತಿ
ದುರ್ಗಕಾನನ ಗಹನ ಪರ್ವತಘೋರ ಸರ್ಪ
ಗರ್ಗರ ಶಬ್ದ ವ್ಯಾಘ್ರ ಕರಡಿ ಮೃತ್ಯು
ವರ್ಗ ಭೂತ ಪ್ರೇತ ಪೈಶಾಚಿ ಮೊದಲಾದ
ದುರ್ಗಣ ಸಂಕಟ ಪ್ರಾಪ್ತವಾಗೆ
ದುರ್ಗಾದುರ್ಗೆ ಎಂದು ಉಚ್ಚಸ್ವರದಿಂದ
ನಿರ್ಗಳಿತವಾಗಿ ಒಮ್ಮೆ ಕೂಗಿದರೂ
ಸ್ವರ್ಗಾಪವರ್ಗದಲ್ಲಿ ಹರಿಯೊಡನೆ ಇದ್ದರೂ
ಸುರ್ಗಣ ಜಯ ಜಯವೆಂದು ಪೊಗಳುತಿರೆ
ಕರ್ಗಳಿಂದಲಿ ಎತ್ತಿ ಸಾಕುವ ಸಾಕ್ಷಿ ಭೂತೆ
ನಿರ್ಗುಡಿದಂತೆ ಲೋಕ ಲೀಲೆ ನಿನಗೆ
ಸ್ವರ್ಗಂಗಾಜನಕ ನಮ್ಮ ವಿಜಯ ವಿಠ್ಠಲನಂಘ್ರಿ
ದುರ್ಗಾಶ್ರಮ ಮಾಡಿ ಬದುಕುವಂತೆ ಮಾಡು || 1 ||

ತಾಳ – ಮಟ್ಟ

ಅರಿದರಾಂಕುಶ ಶಕ್ತಿ ಪರಶು ನೇಗಲಿಖಡ್ಗ
ಸರಸಿಜ ಗದೆ ಮುದ್ಗರ ಚಾಪ ಮಾರ್ಗಣ
ವರ ಅಭಯ ಮುಸಲ ಪರಿ ಪರಿ ಆಯುಧವ
ಧರಿಸಿ ಮೆರೆವ ಲಕುಮಿ ಸರಸಿಜ ಭವ ರುದ್ರ
ಸರುವ ದೇವತೆಗಳ ಕರುಣಾಪಾಂಗದಲ್ಲಿ
ನಿರೀಕ್ಷಿಸಿ ಅವರವರ ಸ್ವರೂಪ ಸುಖಕೊಡುವ
ಸಿರಿಭೂಮಿ ದುರ್ಗಾ ಸರ್ವೋತ್ತಮ ನಮ್ಮ
ವಿಜಯ ವಿಠ್ಠಲನಂಘ್ರಿ
ಪರಮ ಭಕುತಿಯಿಂದ ಸ್ಮರಿಸುವ ಜಗಜ್ಜನನಿ || 2 ||

ತಾಳ -ತ್ರಿವಿಡಿ

ಸ್ತುತಿ ಮಾಡುವೆ ನಿನ್ನ ಕಾಳಿ ಮಹಾಕಾಳಿ ಉ
ನ್ನತ ಬಾಹು ಕರಾಳವದನೆ ಚಂದಿರೆ ಮುಖೆ
ಧೃತಿ ಶಾಂತಿ ಬಹುರೂಪೆ ರಾತ್ರಿ ರಾತ್ರಿ ಚರಣೆ
ಸ್ಥಿತಿಯೆ ನಿದ್ರಾಭದ್ರೆ ಭಕ್ತವತ್ಸಲೇ ಭವ್ಯೇ
ಚತುರಷ್ಟ ದ್ವಿಹಸ್ತೆ ಹಸ್ತಿ ಹಸ್ತಿ ಗಮನೆ ಅ
ದ್ಭುತ ಪ್ರಬಲೆ ಪ್ರವಾಸೆ ದುರ್ಗಾರಣ್ಯವಾಸೆ
ಕ್ಷಿತಿಭಾರಹರಣೆ ಕ್ಷೀರಾಬ್ದಿ ತನಯೆ ಸ
ದ್ಗತಿ ಪ್ರದಾತೆ ಮಾಯಾ ಶ್ರೀಯೆ ಇಂದಿರೆ ರಮೆ
ದಿತಿ ಜಾತೆ ನಿಗ್ರಹೆ ನಿರ್ಧೂತ ಕಲ್ಮಷೆ
ಪ್ರತಿಕೂಲ ಭೇದೆ ಪೂರ್ಣಬೋಧೆ ರೌದ್ರೇ
ಅತಿಶಯ ರಕ್ತ ಜಿಹ್ವಾಲೋಲೆ ಮಾಣಿಕ್ಯಮಾಲೆ
ಜಿತಕಾಮೆ ಜನನ ಮರಣ ರಹಿತ ಖ್ಯಾತೆ
ಘೃತ ಪಾತ್ರ ಪರಮಾನ್ನ ತಾಂಬೂಲ ಹಸ್ತೆ ಸು
ವ್ರತೆ ಪತಿವ್ರತೆ ತ್ರಿನೇತ್ರೆ ರಕ್ತಾಂಬರೆ
ಶತಪತ್ರ ನಯನೆ ನಿರುತಕನ್ಯೇ ಉದಯಾರ್ಕ
ಶತಕೋಟಿ ಸನ್ನಿಭೆ ಹರಿಯಾಂಕಸಂಸ್ಥೆ
ಶ್ರುತಿತತಿನುತೆ ಶುಕ್ಲ ಶೋಣಿತ ರಹಿತೆ ಅ
ಪ್ರತಿಹತೆ ಸರ್ವದಾ ಸಂಚಾರಿಣಿ ಹ್ರೀ
ಉತ್ಪತ್ತಿ ಸ್ಥಿತಿಲಯ ಕರ್ತೆ ಶುಭ್ರಶೋಭನ ಮೂರ್ತೆ
ಪತಿತಪಾವನೆ ರನ್ನೆ ಸರ್ವೋಷಧಿಯಲಿದ್ದು
ಹತಮಾಡು ಕಾಡುವ ರೋಗಗಳಿಂದ
ಕ್ಷಿತಿಯೊಳು ಸುಖದಲ್ಲಿ ಬಾಳುವ ಮತಿಯಿತ್ತು
ಸತತ ಕಾಯಲಿ ಬೇಕು ದುರ್ಗೇ ದುರ್ಗೇ
ಚ್ಯುತದೂರ ವಿಜಯ ವಿಠ್ಠಲರೇಯನ ಪ್ರೀಯೆ
ಕೃತಾಂಜಲಿಯಿಂದಲಿ ತಲೆಬಾಗಿ ನಮಿಸುವೆ || 3 ||

ತಾಳ – ಅಟ್ಟ

ಶ್ರೀಲಕ್ಷ್ಮೀಕಮಲಾ ಪದ್ಮಾಪದ್ಮಿನಿ ಕಮ
ಲಾಲಯೆ ರಮಾ ವೃಷಾಕಪಿ ಧನ್ಯಾವೃದ್ಧಿವಿ
ಶಾಲಾ ಯಜ್ಞಾ ಇಂದಿರೆ ಹಿರಣ್ಯ ಹರಿಣಿ
ವಾಲಯ ಸತ್ಯ ನಿತ್ಯಾನಂದ ತ್ರಯಿ ಸುಧಾ
ಶೀಲೆ ಸುಗಂಧ ಸುಂದರಿ ವಿದ್ಯಾಸುಶೀಲೆ
ಸುಲಕ್ಷಣ ದೇವಿ ನಾನಾ ರೂಪಂಗಳಿಂದ ಮೆರೆವ ಮೃತ್ಯುನಾಶೆ
ವಾಲಗಕೊಡು ಸಂತರ ಸನ್ನಿಧಿಯಲ್ಲಿ
ಕಾಲ ಕಾಲಕೆ ಎನ್ನ ಭಾರ ವಹಿಸುವ ತಾಯಿ
ಮೇಲು ಮೇಲು ನಿನ್ನ ಶಕ್ತಿ ಕೀರ್ತಿ ಬಲು
ಕೇಳಿ ಕೇಳಿ ಬಂದೆ ಕೇವಲ ಈ ಮನ
ಘಾಳಿಯಂತೆ ಪರದ್ರವ್ಯಕ್ಕೆ ಪೊಪುದು
ಏಳಲ ಮಾಡದೆ ಉದ್ಧಾರ ಮಾಡುವ
ಕೈಲಾಸಪುರದಲ್ಲಿ ಪೂಜೆಗೊಂಬ ದೇವಿ
ಮೂಲಪ್ರಕೃತಿ ಸರ್ವ ವರ್ಣಾಭಿಮಾನಿನಿ

ಪಾಲಸಾಗರಶಾಯಿ ವಿಜಯ ವಿಠ್ಠಲನೊಳು
ಲೀಲೆ ಮಾಡುವ ನಾನಾಭರಣೆ ಭೂಷಣೆ ಪೂರ್ಣೆ || 4 ||

ತಾಳ – ಆದಿ

ಗೋಪಿನಂದನೆ ಮುಕ್ತೆ ದೈತ್ಯ ಸಂತತಿಗೆ ಸಂ
ತಾಪವ ಕೊಡುತಿಪ್ಪ ಮಹಾಕಠೋರೆ ಉಗ್ರ
ರೂಪ ವೈಲಕ್ಷಣೆ ಅಜ್ಞಾನಕ್ಕಭಿಮಾನಿನಿ
ತಪತ್ರಯ ವಿನಾಶ ಓಂಕಾರೆ ಹೂಂಕಾರೆ
ಪಾಪಿ ಕಂಸಗೆ ಭಯ ತೋರಿದೆ ಬಾಲ ಲೀಲೆ
ವ್ಯಾಪುತ ಧರ್ಮಮಾರ್ಗ ಪ್ರೇರಣೆ ಅಪ್ರಾಕೃತೆ
ಸ್ವಾಪದದಲಿ ನಿನ್ನ ನೆನೆಸಿದ ಶರಣನಿಗೆ
ಅಪಾರವಾಗಿದ್ದ ವಾರಿಧಿಯಂತೆ ಮಹಾ
ಆಪತ್ತು ಬಂದಿರಲು ಹಾರೆ ಪೋಗೋವು ಸಪ್ತ
ದ್ವೀಪ ನಾಯಿಕೆ ನರಕ ನಿರ್ಲೇಪೆ ತಮೋಗುಣದ
ವ್ಯಾಪಾರ ಮಾಡಿಸಿ ಭಕ್ತ ಜನಕೆ ಪುಣ್ಯ
ಸೋಪಾನ ಮಾಡಿಕೊಡುವ ಸೌಭಾಗ್ಯವಂತೆ ದುರ್ಗೆ
ಪ್ರಾಪುತವಾಗಿ ಎನ್ನ ಮನದಲಿ ನಿಂದು ದುಃಖ
ಕೂಪದಿಂದಲಿ ಎತ್ತಿ ಕಡೆ ಮಾಡು ಜನ್ಮಂಗಳ
ಸೌಪರ್ಣಿ ಮಿಗಿಲಾದ ಸತಿಯರು ನಿತ್ಯ ನಿನ್ನ
ಆಪಾದ ಮೌಳಿತನಕ ಭಜಿಸಿ ಭವ್ಯರಾದರು
ನಾ ಪೇಳುವದೇನು ಪಾಂಡವರ ಮನೋಭಿಷ್ಟೆ
ಈ ಪಂಚ ಭೌತಿಕದಲ್ಲಿ ಆವ ಸಾಧನೆ ಕಾಣೆ
ಶ್ರೀಪತಿ ನಾಮ ಒಂದೇ ಜಿಹ್ವಾಗ್ರದಲಿ ನೆನೆವ
ಔಪಾಸನ ಕೊಡು ರುದ್ರಾದಿಗಳ ವರದೇ
ತಾಪಸ ಜನಪ್ರೀಯ ವಿಜಯವಿಠ್ಠಲ ಮೂರ್ತಿಯ
ಶ್ರೀಪಾದಾರ್ಚನೆ ಮಾಳ್ಪ ಶ್ರೀಭೂದುರ್ಗಾ ವರ್ಣಿಶ್ರಯೆ || 5 ||

ಜತೆ

ದುರ್ಗೆ ಹಾ ಹೇ ಹೋ ಹಾಃ ದುರ್ಗೆ ಮಂಗಳ ದುರ್ಗೆ
ದುರ್ಗತಿ ಕೊಡದಿರು ವಿಜಯವಿಠ್ಠಲಪ್ರೀಯೆ || 6 ||

Durga Suladi Lyrics In English

Durgaa durgeye maha dushtajana samhaare
Durgaantargata durge durlabhe sulabhe
Durgamavaagide ninna mahime bomma
Bhargaadigaligella gunisidaroo
swarga bhoomi paataala samasta vyaaputa devi
vargakke meerida balu sumdaree
durgunadavara baadhe bahalavaagide taayi
durgatihaare naanu peluvudenu
durgandhavaagide samsruti nodidare
nirgama naa kaanenamma mangalaange
durge he durge mahaa durge bhoodurge vishnu
durge durjaya durdhakshe shakti
durga kaanana gahana parvata ghora sarpa
gargara shabda vyaaghra karadi mrutyu
Varga bhoota preta paishaaci modalaada
Durgana sankata praaptavaage
durgaa durge endu uccha swaradinda
nirgalitanaagi omme koogidaroo
swargaapavargadalli hariyodane iddaroo
surguna jaya jayavendu pogalutire
Kargalindali etti saakuva saakshi bhoote
Nirgudidante lokaleele ninage
Swargaangaajanaka namma Vijayaviththalananghri
durgaashraya maadi badukuvante maadu || 1 ||

Taala - Matta

Aridaraankusha shakti parashu negalikhadga
Sarasija gade mudgara caapa maargana
vara abhaya musala pari pari aayudhava
dharisi mereva lakumi sarasija bhavarudra
saruva devategala karunaapaangadalli
nireekshisi avaravara swaroopasukha koduva
siri bhoomi durgaa sarvottama namma
Vijayaviththalananghri
parama bhakutiyinda
Smarisuva jagajjanani || 2 ||

Taala - Trividi

Stuti maaduve ninna kaali mahaakaali u
nnata baahu karaalavadane chandiramukhe
Drutishaanti bahuroope raatri raatri charane
Sthitiye nidraa bhadre bhaktavatsale bhavye
Chaturashta dwihaste hasti hastigamane a
dbhuta prabale pravaase durgaaranyavaase
kshiti bhaara harane kshiraabdhi tanaye sa
dgati pradaate maayaa shreeye indire rame

diti jaata nigrahe nirdoota kalmashe
pratikoola bhede poornabhodhe roudre
atishaya rakta jihvaalole maanikya maale
jita kaame janana marana rahita khyaate
ghruta paatra paramaanna taamboola haste su
vrute pativrute trinetre raktaambare
shatapatra nayane nirutakanye udayaarka
shatakoti sannibhe hariyaanka samsthe
shrutitatinute shuklashonita rahite a
Pratihate sarvadaa samchaarini chature
chatura kapardiye ambhrani hri
utpatti sthitilaya karte Shubhra shobhana moorte
patita paavane ranne sarvoshadhiyalliddu
hata maadi kaaduva rogangalinda
kshitiyolu sukhadalli baaluva matiyittu
satata kaayali beku durge durge
Chyutidoora vijayaviththalareyana priye
Krutaanjaliyindali talebaagi namisuve || 3 ||

Taala - Atta

Shreelakshmi kamalaa padmaa padmini kama
Laalaye ramaa vrushaakapi dhanyaavruddhivi
Shaalaa yaj~jaa indire hiranye harini
vaalaya Satya nityaanandatrayi sudhaa
sheele sugandha Sundari vidyaa susheele
sulakshana devi naanaa roopamgalinda mereva mrutyu naashe
Vaalaga kodu santara sannidhiyalli
kaala kaalake enna bhaara vahisuva taayi
melu melu ninna shakti keerti balu
keli keli bande kevala ee mana
ghaaliyante paradravyakke popadu
Elala maadade uddhaara maaduva
kailaasa puradalli poojegomba devi
moola prakruti Sarvavarnaabhimaanini
paalasaagarashaayi Vijayaviththalanolu
leele maaduva naanaabharane bhooshane poorne || 4 ||

Taala - Aadi

Gopinandane mukte daitya santatige san
Taapava kodutippa mahaa kathore ugra
roopa vailakshane aj~jaanakkabhimaani
taapatraya vinaashe omkaare hoomkaare
paapi kamsage bhaya toride baala leele
vyaaputa dharma maarga prerane apraakrute
swaapadadalli ninna nenesida sharananige
apaaravaagidda vaaridhiyante mahaa
aapattu bandiralu haare pogovu sapta
dweepanaayike naraka nirlepe tamogunada

vyaapaara maadisi bhakta janake punya
sopaana maadi koduva soubhaagyavante durge
praaputavaagi enna manadali nindu duhkha
koopadindali etti kade maadu janmangala
souparni migilaada satiyaru nitya ninna
apaadamouli tanaka bhajisi bhavyaraadaru
naa peluvudenu paandavara manobhishte
ee pancha bhoutikadalli aava saadhane kaane
shreepati naama onde jihvaagradali neneva
oupaasana kodu rudraadigala varade
taapasa janapreeya Vijayaviththala moortiya
shreepaadaarchane maalpaa shreebhoodurgaa varnaashraye || 5 ||

Jate

Durge haa he ho haah durge mangala durge |
Durgati kodadiru vijayaviththala preeye || 6 ||